



ಅರುಣ ಪಿ. ಭಟ್ಟ

## ವಾರ ಭವಿಷ್ಯ 21.01.2021ರಿಂದ 27.01.2021ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಸಹೋದರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿದೆ. ಈ ವಾರ ಮೋಜು ಮಸ್ತಿಗೆ ಆಮಂತ್ರಣಗಳು ಹೆಚ್ಚಾಗುವ ಸಾಧ್ಯತೆ ಇದೆ. ಶುಭದಿನ 25. ವಿಷ್ಣು ಸಹಸ್ರನಾಮ ಪಠಿಸಿರಿ.

ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶಗಳು ಕಂಡುಬರಲಿದೆ. ಬ್ಯಾಂಕಿಂಗ್ ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನು ಸಹ ಅನಾಯಾಸವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಅವಿವಾಹಿತರಿಗೆ ವಿವಾಹದ ಯೋಗ ಸಾಧ್ಯತೆ ಕಾಣಬಹುದಾಗಿದೆ. ನಿರೀಕ್ಷಿತವಾದ ಫಲಿತಾಂಶ ದೊರೆಯಲಿದೆ. ಶುಭದಿನ 26. ಹನುಮಾನ್ ಚಾಲಿಸ್ ಪಠಿಸಿರಿ.







ಆತ್ಮೀಯ ವ್ಯಕ್ತಿಗಳೊಡನೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಅನಗತ್ಯವಾಗಿ ಮಾತಿನಲ್ಲಿ ಏನಾದರೂ ಹೇಳಿ ಸಿಲುಕಬೇಡಿ. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವವಾಗಲಿದೆ ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಕೆಲಸ ಮಾಡುವುದಕ್ಕೆ ಪ್ರೇರಣೆ ನೀಡುತ್ತದೆ. ಶುಭದಿನ 22. ಗಣಪತಿಗೆ 108 ದೂರ್ವಾರ್ಚನೆ ಮಾಡಿಸಿರಿ.

ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತವಾದ ಕಾರ್ಯಶೈಲಿ ಕಂಡುಬರುತ್ತದೆ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಪ್ರೇಕ್ಷಣೀಯ ಸ್ಥಳಗಳು ಭೇಟಿ ಮಾಡುವ ಸಾಧ್ಯತೆ ಇದೆ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಶುಭದಿನ 23. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.







ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಪ್ರತಿಯೊಂದು ಕಾರ್ಯಗಳಿಗೂ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ಆದಷ್ಟು ದೂರವಿಡುವುದು ಒಳ್ಳೆಯದು. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ನಿಮ್ಮ ಆಲೋಚನೆ ಅಥವಾ ಮನಸ್ಥಿತಿಯನ್ನು ಕ್ಷುಲ್ಲಕ ವಿಚಾರಗಳಿಗೆ ಹರಿಸಬೇಡಿ. ಶುಭದಿನ 22. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು. ಆರೋಗ್ಯದ ಹಿತದೃಷ್ಟಿಯನ್ನು ಮನಗಾಣಿರಿ. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ನವೀನವಾಗಿ ಪ್ರಾರಂಭ ಮಾಡಿರುವ ಉದ್ಯೋಗ ಭರವಸೆಯ ಮಹಾಪೂರವನ್ನೇ ತರಲಿದೆ. ಆದಾಯ ಹೆಚ್ಚಳವಾಗಿದ್ದರೂ ಸಹ ಖರ್ಚುಗಳು ವಿಪರೀತ ವಾಗಲಿದೆ. ಶುಭದಿನ 25. ಆದಿತ್ಯ ಹೃದಯ ಪಠಿಸಿರಿ.







ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಆರ್ಥಿಕವಾಗಿ ಬಳಲುವಿಕೆ ಈ ವಾರ ಕಂಡುಬರಲಿದೆ. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷತನ ಹೆಚ್ಚಾಗಬಹುದು. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡು ಬರಲಿದೆ. ಶುಭದಿನ 22. ಚಂಡಿ ಪಾರಾಯಣ ಮಾಡಿರಿ.

ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಆದರೆ ಪರಿಣಾಮಕಾರಿಯಾದ ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ಶುಭದಿನ 23. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.







ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ವ್ಯಾವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದಾದ ಸಾಧ್ಯತೆ ಉಂಟು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗಲಿವೆ. ಶುಭದಿನ 24. ಕಾಲಭೈರವನ ಸೇವೆ ಮಾಡಿರಿ.

ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಕೆಲವು ಅದೃಷ್ಟದ ಭಾಗ್ಯಗಳು ಒದಗಿಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಕುಟುಂಬದಲ್ಲಿ ಶಾಂತಿ ನೆಲೆಸಲಿದೆ. ಶುಭದಿನ 23. ಸೌಂದರ್ಯ ಲಹರಿ ಪಠಿಸಿರಿ.







ಅಪರಿಚಿತ ವ್ಯಕ್ತಿಗಳಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಕೆ ದ್ರೋಹದಂತಹ ಚಟುವಟಿಕೆಗಳು ನಡೆಯಲಿದ್ದು ಎಚ್ಚರದಿಂದಿರಿ. ವಾಹನದಲ್ಲಿ ಜಾಗೃತಿವಹಿಸುವುದು ಸೂಕ್ತ. ಪತ್ನಿಯೊಡನೆ ಅತಿ ಹೆಚ್ಚು ಕೋಪ ಕಲಹಗಳಲ್ಲಿ ಪಾಲ್ಗೊಳ್ಳ ಬೇಡಿ. ನಿಮ್ಮೆಲ್ಲಾ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕವಾಗಿ ಬೇಕಾಗಿದೆ. ನಿಮ್ಮ ಶ್ರಮಕ್ಕೆ ಅತ್ಯುತ್ತಮ ಫಲ ಸಿಗಲಿದೆ. ಶುಭದಿನ 26. ಕನಕಧಾರಾ ಸ್ತೋತ್ರ ಪಠಿಸಿರಿ.

ಯೋಜನೆಗಳ ಫಲಿತಾಂಶ ವಿಳಂಬವಾಗುವ ಸಾಧ್ಯತೆ ಇದೆ. ಕಲಿಕೆಯ ವಿಷಯಾಸಕ್ತಿ ತುಂಬಾ ಉತ್ತಮ ಮಟ್ಟದಲ್ಲಿ ಇರಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿಯಲ್ಲಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ಯೋಜನೆಗಳಿಗಾಗಿ ಪರಸ್ಥಳ ವಾಸ ಅನುಭವಿಸಬೇಕಾದ ಸಂದರ್ಭ ಒದಗಿ ಬರಬಹುದು. ಶುಭದಿನ 25. ಚಂಡಿ ಪಾರಾಯಣ ಮಾಡಿರಿ.

